ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ರಾಜ್ಯದಲ್ಲಿ KUIDFC ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ `ಜಲಶ್ರೀ' ಯೋಜನೆ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1031 (1244) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ KUIDFC ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ `ಜಲಶ್ರೀ' ಯೋಜನೆಯಡಿ 24 X 7 ಸಮಯ ಕುಡಿಯುವ ನೀರು ಪೂರೈಕೆ ಯೋಜನೆಯಡಿ ಆಯ್ಕೆಗೊಂಡಿರುವ ಪಟ್ಟಣ ಪ್ರದೇಶಗಳು ಯಾವುವು ಮತ್ತು ಅವುಗಳ ಅನುಷ್ಠಾನಕ್ಕೆ ಹಂಚಿಕೆ ಮಾಡಲಾಗಿರುವ ಆರ್ಥಿಕ ನೆರವು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಸೇರ್ಪಡೆಯಾಗಿರುವ ಪಟ್ಟಣ ಪ್ರದೇಶಗಳನ್ನು ಯಾವ ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ; (ವಿವರ ಒದಗಿಸುವುದು)

(ಇ) ಈ ಯೋಜನೆಯಡಿ ಆಯ್ಕೆ ಆಗಿರುವ ಪಟ್ಟಣ ಪ್ರದೇಶಗಳಲ್ಲಿ ಕಾಮಗಾರಿಗಳ ಅನುಷ್ಠಾನ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಆಯ್ಕೆ ಮಾಡಿರುವ ಹಲವಾರು ಪಟ್ಟಣ ಪ್ರದೇಶಗಳು ಕೇಂದ್ರ ಸರ್ಕಾರದ `ಅಮೃತ್' ಯೋಜನೆಯಡಿ ಕುಡಿಯುವ ನೀರಿನ ವರ್ದನೆ ಕಾರ್ಯಕ್ರಮದಲ್ಲಿ ಕೈಗೊಂಡಿದ್ದು, ಈ ಪಟ್ಟಣಗಳನ್ನು ಮತ್ತೊಮ್ಮೆ `ಜಲಶ್ರೀ' ಯೋಜನೆಯಡಿ ಸೇರಿಸುವುದು ಸರಿಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಮುಂದುವರೆದ `ಜಲಶ್ರೀ' ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಪದೇ ಪದೇ ಬರಗಾಲಕ್ಕೆ ತುತ್ತಾಗುವ ಹಾಗೂ ಭೂಮಿಯ ನೀರಿನ ಮಟ್ಟ ಕರಗುತ್ತಿರುವ ಜಿಲ್ಲೆಗಳಲ್ಲಿನ ಪಟ್ಟಣಗಳನ್ನು ಸೇರಿಸಲು ಸರ್ಕಾರ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ?